MAY 22,2025

ALL INDIA RADIO- DHARWAD

PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಾಜಧಾನಿ ಬೆಂಗಳೂರಿನಲ್ಲಿ, ನೆರೆ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ರಾಜಕಾಲುವೆ ಅಭಿವೃದ್ಧಿಯಂತಹ ಮೂಲ ಸೌಕರ್ಯ ಕಲ್ಪಿಸಲು ಸರ್ಕಾರ ಕ್ರಮ ಕೈಗೊಂಡಿದ್ದು, ಕಾಮಗಾರಿ ಆರಂಭಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಂಗಳೂರಿನಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿದ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಅವರು ಮಾತನಾಡಿದರು. ಒಟ್ಟು 860 ಕಿಲೋಮೀಟರ್ ಉದ್ದವಿರುವ ರಾಜಕಾಲುವೆಯಲ್ಲಿ 491 ಕಿಲೋಮೀಟರ್ ನಷ್ಟು, ಲೈನಿಂಗ್ ಕೆಲಸ ಪೂರ್ಣಗೊಂಡಿದೆ. 173 ಕಿಲೋಮೀಟರ್ ಉದ್ದದ ರಾಜಕಾಲುವೆ ಕಾಮಗಾರಿಗೆ ವಿಶ್ವಬ್ಯಾಂಕ್ ನಿಂದ 2 ಸಾವಿರ ಕೋಟಿ ರೂಪಾಯಿ ಸಾಲ ಪಡೆಯಲಾಗಿದ್ದು, ಮೂರು ವರ್ಷಗಳ ಒಳಗಾಗಿ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದರು.

<><><>

ರಾಯಚೂರು ಜಿಲ್ಲೆ ಲಿಂಗಸೂಗೂರಿನ, ಕಡಕಲ್ ಗ್ರಾಮದ ಆನಂದ ಕುಮಾರ ಅವರು, ಕೇಂದ್ರ ಲೋಕಸೇವಾ ಆಯೋಗದ ಐ.ಎಫ್.ಎಸ್ ಪರೀಕ್ಷೆಯಲ್ಲಿ ರಾ ್ಟ್ರಕ್ಕೆ 41 ನೇ ರ್‍ಯಾಂಕ್ ಪಡೆದಿದ್ದಾರೆ. ತಮ್ಮ ಮೂರನೇ ಪ್ರಯತ್ನದಲ್ಲಿ ಭಾರತೀಯ ಅರಣ್ಯ ಸೇವಾ ಪರೀಕ್ಷೆಯಲ್ಲಿ ಈ ಸಾಧನೆ ಮಾಡಿರುವ ಆನಂದ ಕುಮಾರ್, 2021 ರಲ್ಲಿ ಧಾರವಾಡ ಕೃಷಿ ವಿಶ್ವವಿದ್ಯಾಲಯದಿಂದ ಬಿ.ಎಸ್ಸಿ ಕೃಷಿ ಪದವಿ ಪಡೆದಿದ್ದರು. ಪ್ರದೇಶ ಸಮಾಚಾರದೊಂದಿಗೆ ಅವರು ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಧ್ವನಿ: ಆನಂದ ಕುಮಾರ 35 ಸೆಕೆಂದುಗಳು

<><><>

ಇಂದು ಬ್ರಹ್ಮೋ ಸಮಾಜದ ಸ್ಥಾಪಕ ಹಾಗೂ ಸಾಮಾಜಿಕ ಹರಿಕಾರ ರಾಜಾ ರಾಮ್ ಮೋಹನ ರಾಯ್ ಅವರ ಜನ್ಮ ವಾರ್ಷಿಕ ದಿನ. ಸತಿ, ಬಾಲ್ಯ ವಿವಾಹ ಪದ್ಧತಿಗಳನ್ನು ತೊಡೆದು ಹಾಕಲು ಹೋರಾಡಿ, ಸ್ತ್ರೀ ಸಮಾನತೆಯನ್ನು ಸಾರಿದ ರಾಜಾ ರಾಮ ಮೋಹನ ರಾಯ್ ಅವರ ಜನ್ಮ ದಿನದಂದು ಗಣ್ಯರು ತಮ್ಮ ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಕೇಂದ್ರ ಸರ್ಕಾರದ ರೈಲ್ವೇ ಇಲಾಖೆ ಅಧೀನದ, ಅಮೃತ ಭಾರತ ಸ್ಟೇಶನ್ ಯೋಜನೆಯಡಿ ಪುನರಾಭಿವೃದ್ಧಿ ಕಂಡ ಧಾರವಾಡದ ರೈಲು ನಿಲ್ದಾಣ ಸೇರಿದಂತೆ, ದೇಶದ ಒಟ್ಟು 103 ಅಮೃತ ಭಾರತ ರೇಲ್ವೆ ನಿಲ್ದಾಣಗಳು ಹಾಗೂ ವಿವಿಧ ಯೋಜನೆಗಳ ಉದ್ಘಾಟನಾ ಸಮಾರಂಭ ಜರುಗುತ್ತಿದೆ. ಧಾರವಾಡ ರೇಲ್ವೇ ನಿಲ್ದಾಣದ ಉದ್ಘಾಟನಾ ಸಮಾರಂಭದಲ್ಲಿ ರಾಜ್ಯಪಾಲ ಥಾವರ ಚಂದ್ ಗೆಲ್ಹೋಟ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸಹಿತ ಗಣ್ಯರು ಪಾಲ್ಗೊಂಡಿದ್ದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ರಾಜಸ್ಥಾನದ ಬಿಕಾನೇರ್ ನಲ್ಲಿ ವರ್ಚುವಲ್ ಮಾಧ್ಯಮದ ಮೂಲಕ ಈ ಯೋಜನೆಗಳಿಗೆ ಚಾಲನೆ ನೀಡಿದರು.

<><><>

ಧಾರವಾಡ, ಕರ್ನಾಟಕ ವಿಶ್ವವಿದ್ಯಾಲಯದ, ಡಾಕ್ಟರ್ ಆರ್.ಸಿ ಹಿರೇಮಠ ಕನ್ನಡ ಅಧ್ಯಯನ ಪೀಠದಲ್ಲಿ, ಇಂದಿನಿಂದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ 'ಅನುವಾದ ಸಾಹಿತ್ಯ: ಸಾಂಸ್ಕೃತಿಕ ಅನುಸಂಧಾನ' ವಿಚಾರಗೋಷ್ಠಿಗೆ ಚಾಲನೆ ನೀಡಲಾಗಿದೆ. ನವದೆಹಲಿಯ ಪ್ರಧಾನಮಂತ್ರಿ ಉಚ್ಚತರ ಶಿಕ್ಷಾ ಅಭಿಯಾನ, ಉನ್ನತ ಶಿಕ್ಷಣ ಇಲಾಖೆ ಹಾಗೂ ಬೆಂಗಳೂರಿನ ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತು ಸಹಯೋಗದಲ್ಲಿ ಆಯೋಜಿತ ಕಾರ್ಯಕ್ರಮದಲ್ಲಿ ಒಟ್ಟು ಐದು ಗೋಷ್ಠಿಗಳು ನಡೆಯಲಿವೆ.

<><><>

ಪ್ರತಿಷ್ಠಿತ ಅಂತಾರಾಷ್ಟ್ರೀಯ ಬೂಕರ್ ಪ್ರಶಸ್ತಿಗೆ ಭಾಜನರಾಗಿರುವ ಖ್ಯಾತ ಸಾಹಿತಿ ಬಾನುಮು ಶ್ತಾಕ್ ಹಾಗೂ ಅನುವಾದಕಿ ದೀಪಾ ಬಸ್ತಿ ಅವರನ್ನು ಕೆಯುಡಬ್ಲ್ಯೂಜೆ– ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಅಭಿನಂದಿಸಿದೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ಬರುವ 25 ರಂದು ಪ್ರಸಾರವಾಗಲಿರುವ, ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ–ವಿದೇಶದಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ.

<><><>

ಮಡಿಕೇರಿ ನಗರದ, ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆಸ್ಪತ್ರೆ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ 'ಇಂದಿರಾ ಕ್ಯಾಂಟೀನ್' ಅನ್ನು ಮಡಿಕೇರಿ ವಿಧಾನಸಭಾ ಕ್ಷೇತ್ರದ ಶಾಸಕ ಮಂತರ್ ಗೌಡ ಅವರು ಉದ್ಘಾಟಿಸಿದರು.

<><><>

ಈ ವರ್ಷ ನೈಋತ್ಯ ಮುಂಗಾರು ಬೇಗ ಆರಂಭವಾಗಲಿದ್ದು, ಎರಡು ಮೂರು ದಿನಗಳ ಒಳಗೆ ಕೇರಳ ಪ್ರವೇಶಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಹಾರಾಷ್ಟ್ರ, ಕೊಂಕಣ ಗೋವಾ, ಗುಜರಾತ್ ನಲ್ಲಿ ಸಾಮಾನ್ಯದಿಂದ, ಬಿರುಸಿನ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>